ಮಾನ್ಯ ಶಾಸಕರ ಕ್ಷೇತ್ರದಲ್ಲಿ ಮಹದೇಶ್ವರ ಸಕ್ಕರೆ ಕಾರ್ಖಾನೆ ಬರುತ್ತಿದ್ದು, ಈ ಕಾರ್ಖಾನೆಯು ಕಾರ್ಯ ನಿರ್ವಹಿಸುತ್ತಿರಲಿಲ್ಲವಾದ್ದರಿಂದ, ಕಳೆದ 3 ಸಾಲುಗಳಲ್ಲಿ ಯಾವುದೇ ಸೆಸ್ ಸಂಗ್ರಹವಾಗಿರುವುದಿಲ್ಲ.

ಬನ್ನಾರಿ ಅಮ್ಮನ್ ಸಕ್ಕರೆ ಕಾರ್ಖಾನೆ ವತಿಯಿಂದ 2001-02 ಮತ್ತು 2002-03ನೇ ಸಾಲಿನಲ್ಲಿ ರಸ್ತೆಕರ ಸಂಗ್ರಹವಾಗಿರುವುದಿಲ್ಲ. 2003-04ನೇ ಸಾಲಿನಲ್ಲಿ ಸಂಗ್ರಹವಾದ ರಸ್ತೆ ಕರ ರೂ.71.97 ಲಕ್ಷಗಳಲ್ಲಿ ಶೇ.50 ರಷ್ಟು ಮೊತ್ತವನ್ನು ಮಹದೇಶ್ವರ ಸಕ್ಕರೆ ಕಾರ್ಖಾನೆ ವ್ಯಾಪ್ತಿಯ ರಸ್ತೆಗಳ ಅಭಿವೃದ್ಧಿಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದಿಂದ ಪತ್ರ ಸಂಖ್ಯೆ: ಡಿಎಸ್‌ಕೆ/ರಕರ/ಬನ್ನಾರಿ/25/2006-07 ದಿನಾಂಕ : 05-07-07ರಲ್ಲಿ ಜಿಲ್ಲಾಧಿಕಾರಿಗಳು ಮೈಸೂರು/ಚಾಮರಾಜನಗರ ರವರಿಗೆ ತಿಳಿಸಲಾಗಿದೆ.

ಅ) ಪ್ರಶ್ನೆ "ಅ" ಗೆ ನೀಡಿರುವ ಉತ್ತರವೇ ಅನ್ವಯಿಸುತ್ತದೆ.

ಇ) ಪ್ರಶ್ನೆ "ಅ" ಗೆ ನೀಡಿರುವ ಉತ್ತರವೇ ಅನ್ವಯಿಸುತ್ತದೆ.

514 (1169) ಶ್ರೀ ಬಾಲರಾಜ್ ಎಸ್ (ಕೊಳ್ಳೇಗಾಲ) :- ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಯಳಂದೂರು ಪದವಿ ಪೂರ್ವ ಕಾಲೇಜಿಗೆ ಕಳೆದ ಎರಡು ವರ್ಷಗಳ ಹಿಂದೆ ಕಟ್ಟಡ ನಿರ್ಮಿಸಲು ಬಿಡುಗಡೆಯಾದ ಅನುದಾನವನ್ನು ಉಪಯೋಗಿಸದೇ ಕಟ್ಟಡ ಪ್ರಾರಂಭಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಲ್ಲಿ, ಕಟ್ಟಡ ಪ್ರಾರಂಭಿಸದಿರುವ ಕಾರಣಗಳೇನು;

ಇ) ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಈ) ಇದರ ವಿಳಂಬಕ್ಕೆ ಕಾರಣಗಳೇನು;

ಉ) ಇದಕ್ಕೆ ಕಾರಣರಾದವರ ವಿರುದ್ಧ, ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಯಳಂದೂರಿನ ಸರ್ಕಾರಿ ಪದವಿ ಪೂರ್ವ ವಿಭಾಗಕ್ಕೆ ಕಳೆದ ಎರಡು ವರ್ಷಗಳಲ್ಲಿ ಕಟ್ಟಡ ನಿರ್ಮಾಣಕ್ಕೆ ಯಾವುದೇ

ಅನುದಾನ ಮಂಜೂರಾತಿ ಮಾಡಿರುವುದಿಲ್ಲ. ಆದರೆ ನಬಾರ್ಡ್ ನೆರವಿನ ಆರ್.ಐ.ಡಿ. ಎಫ್-12 ರಡಿ 2006-07ನೇ ಸಾಲಿನಲ್ಲಿ ಮೂರು ಕೊಠಡಿ ನಿರ್ಮಾಣಕ್ಕೆ ಮಂಜೂರಾತಿ ನೀಡಲಾಗಿದೆ.

ಆ) ಅನ್ವಯಿಸುವುದಿಲ್ಲ.

ಇ) ಅನ್ವಯಿಸುವುದಿಲ್ಲ.

ಈ) ಅನ್ವಯಿಸುವುದಿಲ್ಲ.

ಉ) ಅನ್ವಯಿಸುವುದಿಲ್ಲ.

516 (903) ಶ್ರೀ ಬಸವರಾಜ್ ರಾಯರೆಡ್ಡಿ (ಯಲ್‌ಬುರ್ಗ) :- ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುವರ್ಣ ಗ್ರಾಮೋದಯ ಯೋಜನೆಯಡಿಯಲ್ಲಿ ರಾಜ್ಯದ ಯಾವ ಯಾವ ವಿಧಾನಸಭಾ ಕ್ಷೇತ್ರದಲ್ಲಿ ಯಾವ ಯಾವ ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ;

ಆ) ಈ ಯೋಜನೆಯಡಿಯಲ್ಲಿ ಗ್ರಾಮಗಳನ್ನು ಯಾವ ಆಧಾರದ ಮೇಲೆ ಗುರುತಿಸಿ ಆಯ್ಕೆ ಮಾಡಲಾಗಿದೆ;

ಇ) ಈ ಯೋಜನೆಯಡಿಯಲ್ಲಿ ಆಯ್ಕೆಯಾದ ಪ್ರತಿ ಗ್ರಾಮಗಳಿಗೆ ಎಷ್ಟು ಹಣವನ್ನು ನಿಗಧಿಪಡಿಸಿ, ಬಿಡುಗಡೆ ಮಾಡಲಾಗಿದೆ;

ಈ) ಈ ಯೋಜನೆಯಡಿಯಲ್ಲಿ ಆಯ್ಕೆಯಾದ ಗ್ರಾಮಗಳ ಪೈಕಿ ಯಾವ ಯಾವ ಗ್ರಾಮಗಳಲ್ಲಿ ಕಾಮಗಾರಿಯನ್ನು ಪ್ರಾರಂಭಿಸಲಾಗಿದೆ ಹಾಗೂ ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ಬೇಕಾಗುವ ಅನುದಾನವೆಷ್ಟು ಹಾಗೂ ಇದನ್ನು ಯಾವಾಗ ಬಿಡುಗಡೆ ಮಾಡಲಾಗುವುದು?

ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ತಾಲ್ಲೂಕುವಾರು ಆಯ್ಕೆಯಾದ ಗ್ರಾಮಗಳ ವಿವರವನ್ನು ಅನುಬಂಧದಲ್ಲಿ ನೀಡಲಾಗಿದೆ.